# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:11/11/2021ರ ಗುರುವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಸಹಾಯಕ ಅಭಿಯಂತರರು ವಾರ್ಡ್–145
3. ಕೆಲಸ ಪರಿವೀಕ್ಷಕರು ವಾರ್ಡ್–145
4. ಕಿರಿಯ ಇಂಜಿನಿಯರ್ (ವಿದ್ಯುತ್)
5. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.
6. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ವಾರ್ಡ್ 145
7. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಕಿರಿಯ ಇಂಜಿನಿಯರ್ (ಬೆಸ್ಕಾಂ)
2. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145.
3. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
4. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
5. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–145.

*********

1. 9ನೇ ಅಡ್ಡರಸ್ತೆ, ವಿಲ್ಸನ್‌ಗಾರ್ಡನ್‌ನಲ್ಲಿ ಒಳಚರಂಡಿಗಾಗಿ ರಸ್ತೆ ಅಗೆಯಲಾಗಿದ್ದು, ರಸ್ತೆ ದುರಸ್ಥಿ ಪಡಿಸಲು ಸಾರ್ವಜನಿಕರು ಕೋರಿದರು – ಈಗಾಗಲೇ ಮಳೆ ಬೀಳುತ್ತಿರುವುದರಿಂದ ರಸ್ತೆಗೆ ಡಾಂಬರೀಕರಣ ಮಾಡಲಾಗುವುದಿಲ್ಲ. ಮಳೆ ನಿಂತ ನಂತರ ರಸ್ತೆಯನ್ನು ದುರಸ್ಥಿಪಡಿಸಲಾಗುವುದು ಎಂದು ವಾರ್ಡ್ ಇಂಜನಿಯರ್ ರವರು ಸಭೆಗೆ ತಿಳಿಸಿದರು.



Scanned with CamScanner

2. ವಾರ್ಡ್‌ನ ಆನೆ ಪಾರ್ಕ್‌ನಲ್ಲಿ ಹಾಗೂ ವಿಲ್ಸನ್‌ಗಾರ್ಡನ್ 4, 7ನೇ ಅಡ್ಡರಸ್ತೆಗಳಲ್ಲಿ ಬೀದಿ ದೀಪಗಳು ಬರುತ್ತಿಲ್ಲವೆಂದು ಶ್ರೀ. ಸುಬಾಷ್‌ಚಂದ್ರ ರವರು ಸಭೆಯಲ್ಲಿ ಕೋರಿದರು – ಕಿರಿಯ ಅಭಿಯಂತರರು (ವಿದ್ಯುತ್) ಬಿಬಿಎಂಪಿ ರವರು ಮಾತನಾಡಿ ಬೀದಿ ದೀಪಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

3. ಬಿ.ಟಿ.ಎಸ್ ರಸ್ತೆಯಲ್ಲಿರುವ ಪಿ.ಡಬ್ಲ್ಯೂ.ಡಿ ಕ್ವಾಟ್ರಸ್‌ಗಳಿಗೆ ಸಂಬಂಧಿಸಿದಂತೆ ಕಟ್ಟಡದ ಸ್ಥಿರತೆ ಬಗ್ಗೆ ನೋಟಿಸ್ ನೀಡಲು ವಾರ್ಡ್ ಇಂಜಿನಿಯರ್ ರವರಿಗೆ ಅಧ್ಯಕ್ಷರು ಸೂಚಿಸಿದರು.

4. ವಾರ್ಡ್‌ನ ವಿಲ್ಸನ್‌ಗಾರ್ಡನ್ 3ನೇ ಮತ್ತು 4ನೇ ಅಡ್ಡರಸ್ತೆಯಲ್ಲಿ ಕಟ್ಟಡದ ಅವಶೇಷಗಳನ್ನು ಬೇರೆಡೆಯಿಂದ ತಂದು ಸುರಿದಿದ್ದು, ತೆರವುಗೊಳಿಸಲು ಸಾರ್ವಜನಿಕರು ಸಭೆಯಲ್ಲಿ ಕೋರಿದರು – ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದೆಂದು ವಾರ್ಡ್ ಇಂಜಿನಿಯರ್ ಸಭೆಗೆ ತಿಳಿಸಿದರು.

5. ವಿಲ್ಸನ್‌ಗಾರ್ಡನ್ ಏರಿಯಾದಲ್ಲಿ ಫ್ಲವರ್‌ಶಾಪ್ ಮಾಲೀಕರು ಫುಟ್‌ಪಾತ್ ಮೇಲೆ ಫ್ಲವರ್‌ಗಳನ್ನು ಇಟ್ಟು ಮಾರುತ್ತಿದ್ದು, ಇದರಿಂದ ಪಾದಚಾರಿಗಳಿಗೆ ತೊಂದರೆಯಾಗುತ್ತಿದ್ದು, ತೆರವುಗೊಳಿಸಲು ಸಭೆಯಲ್ಲಿ ಕೋರಿದರು. – ಫುಟ್‌ಪಾತ್ ಮೇಲೆ ಫ್ಲವರ್‌ಗಳನ್ನು ಇಡದಂತೆ ಕ್ರಮ ಕೈಗೊಳ್ಳಲು ವಾರ್ಡ್ ಇಂಜನಿಯರ್ ರವರಿಗೆ ಅಧ್ಯಕ್ಷರು ಸೂಚಿಸಿದರು.

6. ವಾರ್ಡ್ ರಸ್ತೆಗಳಲ್ಲಿ ರಸ್ತೆಗುಂಡಿಗಳು ಹೆಚ್ಚಾಗುತ್ತಿವೆ ರಸ್ತೆಗುಂಡಿಗಳನ್ನು ಮುಚ್ಚಲು ಸಭೆಯಲ್ಲಿ ಸಾರ್ವಜನಿಕರು ಕೋರಿದರು – ಈಗಾಗಲೇ ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ರಸ್ತೆಗುಂಡಿಗಳನ್ನು ಮುಚ್ಚಲಾಗಿರುತ್ತದೆ. ಈಗ ಪ್ರತಿ ದಿನ ಮಳೆ ಬಿಡದೆ ಬರುತ್ತಿರುವುದರಿಂದ ರಸ್ತೆಗುಂಡಿಗಳು ಹೆಚ್ಚಾಗುತ್ತಿದ್ದು, ಮಳೆ ನಿಂತ ನಂತರ ರಸ್ತೆಗುಂಡಿಗಳನ್ನು ಮುಚ್ಚಲಾಗುತ್ತದೆ ಎಂದು ಸಭೆಗೆ ವಾರ್ಡ್ ಅಭಿಯಂತರರು ತಿಳಿಸಿದರು.

7. ವಿಲ್ಸನ್‌ಗಾರ್ಡನ್ 8ನೇ ಅಡ್ಡರಸ್ತೆಯಲ್ಲಿ ರಾಜ ಕಾಲುವೆ ಮೇಲ್ಭಾಗದಲ್ಲಿ 4 ಚಪ್ಪಡಿಗಳು ಒಡೆದು ಹೋಗಿದ್ದು, ದುರಸ್ಥಿಪಡಿಸಲು ಸಭೆಯಲ್ಲಿ ವಾರ್ಡಿನ ಸಾರ್ವಜನಿಕರು ಕೋರಿದರು. – ದುರಸ್ಥಿ ಪಡಿಸಲು ಈಗಾಗಲೇ ರಾಜಾಕಾಲುವೆ ವಿಭಾಗಕ್ಕೆ ಮೌಖಿಕವಾಗಿ ತಿಳಿಸಲಾಗಿದ್ದು, ಛಾಯಾಚಿತ್ರವನ್ನು ಕಳುಹಿಸಿಕೊಡಲಾಗಿರುತ್ತದೆ. ಹಾಗೂ ಪತ್ರವನ್ನು ಬರೆಯಲಾಗುವುದೆಂದು ಸಭೆಗೆ ವಾರ್ಡ್ ಇಂಜಿನಿಯರ್ ತಿಳಿಸಿದರು.



Scanned with CamScanner

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner